# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 121
ಸದಸ್ಯರ ಹೆಸರು : ಶ್ರೀ ಎಸ್.ರವಿ

(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : **14.02.2024**
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | **ಪ್ರಶ್ನೆ** | **ಉತ್ತರ** |
|---|---|---|
| ಅ) | ರಾಮನಗರ ಜಿಲ್ಲೆಯ ಹಾರೋಹಳ್ಳಿಯನ್ನು ನೂತನ ತಾಲ್ಲೂಕು ಎಂದು ಘೋಷಣೆ ಮಾಡಲಾಗಿದ್ದು, ಇಲ್ಲಿ ತಾಲ್ಲೂಕು ಮಟ್ಟದ ಕಛೇರಿಗಳನ್ನು ನಿರ್ಮಾಣ ಮಾಡಲು ಸ್ಥಳಗಳನ್ನು ಗುರುತಿಸಲಾಗಿದೆಯೇ;<br>ಗುರುತಿಸಿದ್ದಲ್ಲಿ, ಯಾವ ಯಾವ ಕಛೇರಿಗಳಿಗೆ ಎಲ್ಲೆಲ್ಲಿ ಮತ್ತು ಎಷ್ಟು ಜಾಗವನ್ನು ಗುರುತಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು) | ಹಾರೋಹಳ್ಳಿ ತಾಲ್ಲೂಕು ಅಧಿಕೃತವಾಗಿ ದಿನಾಂಕ:21.02.2023 ರಲ್ಲಿ ಅಸ್ತಿತ್ವಕ್ಕೆ ಬಂದಿರುತ್ತದೆ.<br>ಹಾರೋಹಳ್ಳಿ ತಾಲ್ಲೂಕಿನಲ್ಲಿ ತಾಲ್ಲೂಕು ಮಟ್ಟದ ಕಚೇರಿಗಳನ್ನು ಒಂದೇ ಕಟ್ಟಡದಲ್ಲಿ ನಿರ್ಮಾಣ ಮಾಡಲು ಹಾರೋಹಳ್ಳಿ ಗ್ರಾಮದ ಸ.ನಂ. 91 ರಲ್ಲಿ 3-06 ಎಕರೆ/ಗುಂಟೆ ಜಮೀನನ್ನು ಗುರುತಿಸಲಾಗಿರುತ್ತದೆ. |
| ಆ) | ಹಾರೋಹಳ್ಳಿ ನೂತನ ತಾಲ್ಲೂಕು ಕಛೇರಿಗಳ ನಿರ್ಮಾಣಕ್ಕಾಗಿ ಮತ್ತು ಮೂಲಭೂತ ಸೌಕರ್ಯಗಳಿಗಾಗಿ ಎಷ್ಟು ಹಣ ಮೀಸಲಿರಿಸಲಾಗಿದೆ; ಈ ಕಛೇರಿಗಳಿಗೆ ಕಲ್ಪಿಸುತ್ತಿರುವ ಮೂಲಭೂತ ಸೌಕರ್ಯಗಳೇನು? (ಸಂಪೂರ್ಣ ವಿವರ ನೀಡುವುದು) | ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 100 ಡಬ್ಲ್ಯೂಬಿಆರ್ 2017, ದಿನಾಂಕ:31.10.2017 ರಲ್ಲಿ ತಾಲ್ಲೂಕು ಆಡಳಿತ ಸೌಧ ಕಟ್ಟಡಕ್ಕೆ ಅಗತ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒಳಗೊಂಡಂತೆ ರೂ.10.00 ಕೋಟಿಗಳಲ್ಲಿ ನಿರ್ಮಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ತಾಲ್ಲೂಕು ಆಡಳಿತ ಸೌಧ ಕಟ್ಟಡ ಕಾಮಗಾರಿಯು ಮುಂದುವರೆದ ಯೋಜನೆಯಾಗಿರುವುದರಿಂದ ಆಯವ್ಯಯ ಲಭ್ಯತೆಗನುಗುಣವಾಗಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು |

ಸಂಖ್ಯೆ: ಆರ್‌ಡಿ 07 ಎಲ್‌ಜಿಕ್ಯೂ 2024 (ಇ)

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು